## ಆಯುಕ್ತರು, ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು, ಕರ್ನಾಟಕ ಸರ್ಕಾರ ರವರ ನಡವಳಿಗಳು

**ವಿಷಯ :** ರಾಜ್ಯದ 18 ಜಿಲ್ಲೆಗಳ ಗ್ರಾಮೀಣ ಪ್ರದೇಶದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳ ಸಮೀಕ್ಷೆ ಕಾರ್ಯಕ್ಕೆ ಜಿಲ್ಲಾ ನೋಡಲ್ ಅಧಿಕಾರಿ, ಮೇಲ್ವಿಚಾರಕರು ಮತ್ತು ಗಣತಿದಾರರು ಇವರುಗಳನ್ನು ನೇಮಿಸುವ ಕುರಿತು.

**ಓದಲಾಗಿದೆ :** 1. ದಿನಾಂಕ: 26.02.2021 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ಸಮೀಕ್ಷಾ ಸಮಿತಿ ಸಭಾ ನಡವಳಿ.

2. ದಿನಾಂಕ: 26.07.2021 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ವೀಡಿಯೋ ಸಂವಾದದ ನಡವಳಿ.

*****

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ನೇಮಕಾತಿ ನಿಷೇದ ಮತ್ತು ಅವರ ಪುನರ್ವಸತಿ ಕಾಯ್ದೆ ಮತ್ತು ನಿಯಮಗಳು, 2013 ರ ಪ್ರಕಾರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ 26.02.2021 ರಂದು ನಡೆದ ರಾಜ್ಯ ಮಟ್ಟದ ಸಮೀಕ್ಷಾ ಸಮಿತಿಯ ಸಭಾ ನಡವಳಿಯಲ್ಲಿನ ಕ್ರಮ ಸಂಖ್ಯೆ (1) ರ (4) ರಲ್ಲಿ ಈಗಾಗಲೇ ಸಮೀಕ್ಷೆ ನಡೆಸಿರುವ 12 ಜಿಲ್ಲೆಗಳನ್ನು ಹೊರತುಪಡಿಸಿ ಬಾಕಿ ಉಳಿದ 18 ಜಿಲ್ಲೆಗಳಲ್ಲೂ (ಅಂದರೆ: ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ಗದಗ, ಹಾಸನ, ಕೊಡಗು, ಕೊಪ್ಪಳ, ಮಂಡ್ಯ, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ ಮತ್ತು ಯಾದಗಿರಿ) ಸಹ ಸಮೀಕ್ಷೆಯನ್ನು ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಕೈಗೊಳ್ಳಲು ತೀರ್ಮಾನಿಸಲಾಗಿರುತ್ತದೆ.

ಮೇಲೆ ಓದಲಾದ (2) ರಲ್ಲಿ, ದಿನಾಂಕ 26.07.2021 ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ಅಧ್ಯಕ್ಷತೆಯಲ್ಲಿ ನಡೆದ ವಿಡಿಯೋ ಸಂವಾದ ನಡವಳಿಯ ವಿಷಯಸೂಚಿ ಸಂಖ್ಯೆ (1) ಮತ್ತು (2) ರಲ್ಲಿ ಆಯಾ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ (ಅಭಿವೃದ್ಧಿ), ಆಯಾ ತಾಲ್ಲೂಕು ಪಂಚಾಯತಿಯ ಕಾರ್ಯ ನಿರ್ವಾಹಕ ಅಧಿಕಾರಿ ಮತ್ತು ಆಯಾ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿ ಗ್ರೇಡ್ 1 ಅಥವಾ ಗ್ರೇಡ್ 2 ಇವರುಗಳನ್ನು ಅನುಕ್ರಮವಾಗಿ ಜಿಲ್ಲಾ ನೋಡಲ್ ಅಧಿಕಾರಿ (ಗ್ರಾಮೀಣ), ಮೇಲ್ವಿಚಾರಕ ಮತ್ತು ಗಣತಿದಾರರೆಂದು ನೇಮಿಸಲು ತೀರ್ಮಾನಿಸಲಾಗಿರುತ್ತದೆ.

**ಅದುದರಿಂದ, ಈ ಕೆಳಕಂಡ ಆದೇಶ:**

**ಆದೇಶ ಸಂಖ್ಯೆ: KPRC-ADM20RMS/07/2021 (PART-1), ಬೆಂಗಳೂರು, ದಿನಾಂಕ: 02.11.2021**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ 18 ಜಿಲ್ಲೆಗಳಾದ ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ಗದಗ, ಹಾಸನ, ಕೊಡಗು, ಕೊಪ್ಪಳ, ಮಂಡ್ಯ, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ ಮತ್ತು ಯಾದಗಿರಿ ಗ್ರಾಮೀಣ ಭಾಗದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಕಾರ್ಯಕ್ಕೆ ಈ ಕೆಳಕಂಡ ಅಧಿಕಾರಿಗಳನ್ನು ಜಿಲ್ಲಾ ನೋಡಲ್ ಅಧಿಕಾರಿ, ಮೇಲ್ವಿಚಾರಕರು ಮತ್ತು ಗಣತಿದಾರರನ್ನಾಗಿ ನೇಮಿಸಿ ಆದೇಶಿಸಿದೆ.

...2

| ಕ್ರ. ಸಂ | ಹುದ್ದೆ | ಸಮೀಕ್ಷಾ ಕಾರ್ಯದ ಹುದ್ದೆ |
|---|---|---|
| 1 | ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ (ಅಭಿವೃದ್ಧಿ) | ಜಿಲ್ಲಾ ನೋಡಲ್ ಅಧಿಕಾರಿ (ಗ್ರಾಮೀಣ) |
| 2 | ತಾಲ್ಲೂಕು ಪಂಚಾಯತಿಯ ಕಾರ್ಯ ನಿರ್ವಾಹಕ ಅಧಿಕಾರಿ | ಮೇಲ್ವಿಚಾರಕ |
| 3 | ಗ್ರಾಮ ಪಂಚಾಯತಿಯ ಕಾರ್ಯದರ್ಶಿ ಗ್ರೇಡ್-1 ಅಥವಾ ಗ್ರೇಡ್-2/ದ್ವಿತೀಯ ದರ್ಜೆ ಲೆಕ್ಕ ಸಹಾಯಕ | ಗಣತಿದಾರರು |

ಈ ಸಮೀಕ್ಷೆಯನ್ನು ಯಶಸ್ವಿಯಾಗಿ ಕಾರ್ಯಗತಗೊಳಿಸಲು ಅನುವಾಗುವಂತೆ ಆಯಾ ಜಿಲ್ಲಾ ಪಂಚಾಯತಿ ಅಧೀನದಲ್ಲಿ ಬರುವ ಇತರೆ ಇಲಾಖೆಗಳ ಜಿಲ್ಲಾ ಮುಖ್ಯಸ್ಥರನ್ನು ತಾಲ್ಲೂಕಿಗೆ ಒಬ್ಬರಂತೆ ತಾಲ್ಲೂಕು ನೋಡಲ್ ಅಧಿಕಾರಿ (ಗ್ರಾಮೀಣ)ಯನ್ನಾಗಿ ಮತ್ತು ಆ ಇಲಾಖೆಗಳ ತಾಲ್ಲೂಕು ಮುಖ್ಯಸ್ಥರನ್ನು ಸಹ ಮೇಲ್ವಿಚಾರಕನ್ನಾಗಿ ನೇಮಿಸಲು ಆಯಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಜಿಲ್ಲಾ ನೋಡಲ್ ಅಧಿಕಾರಿ (ಗ್ರಾಮೀಣ) ಇವರ ಅಧೀನದಲ್ಲಿ ತಾಲ್ಲೂಕು ನೋಡಲ್ ಅಧಿಕಾರಿಗಳು ಹಾಗೂ ಮೇಲ್ವಿಚಾರಕರುಗಳು ಮತ್ತು ತಾಲ್ಲೂಕು ನೋಡಲ್ ಅಧಿಕಾರಿ (ಗ್ರಾಮೀಣ) ಇವರ ಅಧೀನದಲ್ಲಿ ಸಹ-ಮೇಲ್ವಿಚಾರಕರು ಕರ್ತವ್ಯ ನಿರ್ವಹಿಸತಕ್ಕದ್ದು.

21/11/24

**(ಶಿಲ್ಪಾ ನಾಗ್, ಭಾ.ಆ.ಸೇ)**
ಆಯುಕ್ತರು
ಪಂಚಾಯತ್ ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

**ಇವರಿಗೆ:**

1 ಜಿಲ್ಲಾಧಿಕಾರಿಗಳು, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ಗದಗ, ಹಾಸನ, ಕೊಡಗು, ಕೊಪ್ಪಳ, ಮಂಡ್ಯ, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ ಮತ್ತು ಯಾದಗಿರಿ ಜಿಲ್ಲೆಗಳಿಗೆ.

2 ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ಗದಗ, ಹಾಸನ, ಕೊಡಗು, ಕೊಪ್ಪಳ, ಮಂಡ್ಯ, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ ಮತ್ತು ಯಾದಗಿರಿ.

3 ಉಪ ಕಾರ್ಯದರ್ಶಿಗಳು (ಅಭಿವೃದ್ಧಿ), ಜಿಲ್ಲಾ ಪಂಚಾಯತ್, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ಗದಗ, ಹಾಸನ, ಕೊಡಗು, ಕೊಪ್ಪಳ, ಮಂಡ್ಯ, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ ಮತ್ತು ಯಾದಗಿರಿ.

4 ರಾಜ್ಯದ 18 ಜಿಲ್ಲೆಗಳ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ – ಆಯಾ

ಜಿಲ್ಲಾ ಪಂಚಾಯತಿಗಳ ಮುಖಾಂತರ.

5 ರಾಜ್ಯದ 18 ಜಿಲ್ಲೆಗಳ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಕಾರ್ಯದರ್ಶಿ ಗ್ರೇಡ್-1 ಅಥವಾ ಗ್ರೇಡ್-2/ ದ್ವಿತೀಯ ದರ್ಜೆ ಲೆಕ್ಕ ಸಹಾಯಕರು – ಆಯಾ ತಾಲ್ಲೂಕು ಪಂಚಾಯತಿಗಳ ಮುಖಾಂತರ.

**ಪ್ರತಿ ಮಾಹಿತಿಗಾಗಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.

2 ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪಂರಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.

3 ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಅಪಂರಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.

4 ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

5 ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.

6 ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.

7 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.

8 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.

9 ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.